**ದಿನಾಂಕಃ 22-03-2024 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಕೆ.ಸಿ.ಹೆಚ್. ವಕೀಲರಿಂದಃ**

ಅಂಗನ್ಯೂನತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ಈಗ ನಿ ಪಿ -9 ಎಂದು ಗುರುತಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ ವಿ.ಎಸ್.ಎ ವಕೀಲರಿಂದಃ**

ನನ್ನ ಬಳಿ ಎರಡು ಎತ್ತುಗಳು ಮಾತ್ರ ಇತ್ತು. ಎತ್ತಿನ ಗಾಡಿಯನ್ನು ನನ್ನ ಅಳಿಯ ಸಿದ್ದಲಿಂಗಪ್ಪ ರವರು ಓಡಿಸುತ್ತಿದ್ದನು. ನಾನು ಆ ಎತ್ತಿನ ಗಾಡಿಯ ಹಿಂಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದೇನು. ಎತ್ತಿನ ಗಾಡಿಯನ್ನು ನನ್ನ ಅಳಿಯ ರಸ್ತೆಯ ಮಧ್ಯ ಭಾಗದಲ್ಲಿ ಹೊಡೆದುಕೊಂಡು ಹೋಗುತ್ತಿದ್ದ ಎಂದರೆ ರಸ್ತೆಯ ಎಡಭಾಗದಲ್ಲಿ ಹೊಡೆದುಕೊಂಡು ಹೋಗುತ್ತಿದ್ದನು. ನನ್ನ ಅಳಿಯನ ತಪ್ಪಿನಿಂದ ಅಪಘಾತವಾಯಿತು ಎಂದರೆ ಸರಿಯಲ್ಲ. ಲಾರಿಯವನು ನಮ್ಮ ಎತ್ತಿನ ಗಾಡಿಗೆ ಡಿಕ್ಕಿ ಮಾಡಿದ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎರಡು ಎತ್ತುಗಳ ಮೌಲ್ಯ ಎಷ್ಟು ಇತ್ತು ಎಂದು ಅದಕ್ಕೆ ಸಂಬಂದಪಟ್ಟ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಸಾಕ್ಷಿಯೂ ಮುಂದುವರೆದು ಎರಡು ಎತ್ತುಗಳಿಗೆ 1,50,000/- ರೂ. ಆಗುತ್ತಿತ್ತು ಎಂದು ಹೇಳುತ್ತಾರೆ. ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎತ್ತಿನ ಗಾಡಿಗೆ ಯಾವುದೇ ರೀತಿಯ ಹಾನಿಯಾಗಿಲ್ಲ ಎಂದರೆ ಸರಿಯಲ್ಲ. ಲಾರಿಯ ಚಾಲಕನಿಗೆ ಸೂಕ್ತ ಡಿ ಎಲ್ ಇರಲಿಲ್ಲ ಎಂದರೆ ಸರಿಯಲ್ಲ. ಅಪಘಾತ ನನ್ನ ಅಳಿಯ ತಪ್ಪಿನಿಂದ ಆಗಿರುವ ಕಾರಣ ಹಾಗೂ ಲಾರಿ ಚಾಲಕನಿಗೆ ಇಲ್ಲದ ಕಾರಣ 2 ನೇ ಎದುರುದಾರರು ಪರಿಹಾರ ಕೊಡಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ.

Sd/-
(ಬಿ.ಸಿದ್ದರಾಜು)
1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.